# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 736
ಸದಸ್ಯರ ಹೆಸರು : ಶ್ರೀ ವೈ.ಎಂ. ಸತೀಶ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 19-09-2022
ಉತ್ತರಿಸುವ ಸಚಿವರು : ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ನಮ್ಮ ನಾಡಿನ ಪಾರಂಪರಿಕ ಕಲೆಗಳಾದ ಕಂಸಾಳೆ, ಚೌಡಿಕೆ, ವೀರಭದ್ರ ಕುಣಿತ ಡೋಲು ಬಡಿತ, ನಾದಸ್ವರ, ಕಲಿಕೆಯಂತಹ ಕಲೆಗಳನ್ನು ಉಳಿಸುವ ಮತ್ತು ಬೆಳೆಸುವ ನಿಟ್ಟಿನಲ್ಲಿ ಸರ್ಕಾರದ ಯೋಜನೆಗಳು ಯಾವುದಾದರೂ ಇವೆಯೇ, ಇದ್ದಲ್ಲಿ, ಮಾಹಿತಿ ನೀಡುವುದು; | ನಾಡಿನ ಪಾರಂಪರಿಕ ಕಲೆಗಳಾದ ಕಂಸಾಳೆ, ಚೌಡಿಕೆ, ವೀರಭದ್ರ ಕುಣಿತ, ಡೋಲು ಬಡಿತ, ನಾದಸ್ವರ ಕಲಿಕೆಯಂತಹ ಕಲೆಗಳನ್ನು ಉಳಿಸಿ, ಬೆಳೆಸುವ ನಿಟ್ಟಿನಲ್ಲಿ ಸರ್ಕಾರವು ಈ ಕೆಳಕಂಡ ಯೋಜನೆಗಳನ್ನು ಜಾರಿಗೆ ತಂದಿರುತ್ತದೆ.<br>1. ಪ್ರಾಯೋಜನೆ ಯೋಜನೆ,<br>2. ಸಾಂಸ್ಕೃತಿಕ ಸೌರಭ,<br>3. ಯುವ ಸೌರಭ,<br>4. ಜನಪರ ಉತ್ಸವ,<br>5. ಗಿರಿಜನ ಉತ್ಸವ<br>ವಿವಿಧ ಕಲಾಪ್ರಕಾರದ ಕಲಾ ತಂಡಗಳಿಗೆ ಅವಕಾಶ ನೀಡುವ ಮೂಲಕ ಕಲೆಗಳನ್ನು ಉಳಿಸಿ ಬೆಳೆಸಲು ಮತ್ತು ಕಲಾ ಪ್ರದರ್ಶನಕ್ಕೆ ಅವಕಾಶ ನೀಡಲಾಗುತ್ತಿದೆ.<br>ಇಲಾಖಾ ವ್ಯಾಪ್ತಿಯಲ್ಲಿರುವ ಕರ್ನಾಟಕ ಜಾನಪದ ಅಕಾಡೆಮಿ ವತಿಯಿಂದ ಸದರಿ ಕಲಾ ಪ್ರಕಾರಗಳಲ್ಲಿ ತರಬೇತಿ ಹಮ್ಮಿಕೊಂಡು, ಆ ಕಲೆಗಳಿಗೆ ವೇದಿಕೆಗಳಲ್ಲಿ ಅವಕಾಶ ಮಾಡಿಕೊಡಲಾಗುತ್ತಿದೆ ಹಾಗೂ ಕಲಾ ಪ್ರೋತ್ಸಾಹಕ್ಕಾಗಿ ವಿಚಾರ ಸಂಕಿರಣಗಳು ಮತ್ತು ಪ್ರಶಸ್ತಿಗಳನ್ನು ನೀಡಲಾಗುತ್ತಿದೆ.<br>ಮುಂದುವರೆದು, ಕರ್ನಾಟಕ ಸಂಗೀತ-ನೃತ್ಯ ಅಕಾಡೆಮಿ ಮೂಲಕ ನಾದಸ್ವರ ಮತ್ತು ಡೋಲು ವಾದನಕ್ಕೆ ಪ್ರೋತ್ಸಾಹ ನೀಡುವ ಸಲುವಾಗಿ ತರಬೇತಿ ಶಿಬಿರ, ನಾದಸ್ವರ ಅಭ್ಯರ್ಥಿಗಳಿಗೆ ಶಿಷ್ಯವೇತನ, ಅನುಪಮ ಸೇವೆ ಸಲ್ಲಿಸಿದ ಹಿರಿಯ ಕಲಾವಿದರನ್ನು ಗುರುತಿಸಿ ಕರ್ನಾಟಕ ಕಲಾಶ್ರೀ ಪ್ರಶಸ್ತಿ, ಅಕಾಡೆಮಿ ಕಾರ್ಯಕ್ರಮಗಳಲ್ಲಿ ನಾದಸ್ವರ (ಡೋಲು ವಾದನವನ್ನು ಒಳಗೊಂಡಂತೆ) ಕಾರ್ಯಕ್ರಮವನ್ನು ಹಮ್ಮಿಕೊಂಡು ಪ್ರೋತ್ಸಾಹ ನೀಡಲಾಗುತ್ತಿದೆ. |
| ಆ) | ಡೋಲು ಬಡಿತ, ನಾದಸ್ವರ ಕಲಿಕೆಗೆ ಹೆಚ್ಚಿನ ಬೇಡಿಕೆಯಿದ್ದು ಇದನ್ನು ಕಲಿಸುವ ಶಾಲೆಗಳನ್ನು ಜಿಲ್ಲೆಗೊಂದರಂತೆ ಸ್ಥಾಪಿಸಲು ಹಾಗೂ ಇವುಗಳ ಬಗ್ಗೆ ಹೆಚ್ಚಿನ ಅಧ್ಯಯನವನ್ನು ಮಾಡಿ ಕಲೆಗಳನ್ನು ಉಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಯಾವುದೇ ಕಲಾ ಪ್ರಕಾರಗಳಿಗೆ ಸಂಬಂಧಿಸಿದಂತೆ ಶಾಲೆಗಳನ್ನು ಸ್ಥಾಪಿಸಲು ಅವಕಾಶವಿರುವುದಿಲ್ಲ.<br>ನಾಡಿನ ಕಲೆ, ಸಾಹಿತ್ಯ, ಸಂಸ್ಕೃತಿಯನ್ನು ಉಳಿಸಿ ಬೆಳೆಸಲು ಕರ್ನಾಟಕ ಜಾನಪದ ಅಕಾಡೆಮಿ, ಸಂಗೀತ-ನೃತ್ಯ, ಶಿಲ್ಪಕಲೆ, ಲಲಿತಕಲೆ, ಯಕ್ಷಗಾನ, ಬಯಲಾಟ, |

| | | |
|---|---|---|
| | | ಸಾಹಿತ್ಯ, ನಾಟಕ, ಬ್ಯಾರಿ, ಕೊಂಕಣಿ, ತುಳು, ಕೊಡವ, ಲಂಬಾಣಿ ಸಾಹಿತ್ಯ ಅಕಾಡೆಮಿಯನ್ನು ಒಳಗೊಂಡಂತೆ 06 ರಂಗಾಯಣಗಳು, ಪುಸ್ತಕ ಪ್ರಾಧಿಕಾರ, ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಮುಖಾಂತರ ಕಲೆಗಳ ಪ್ರದರ್ಶನ, ಸಂಗೀತ ನೃತ್ಯ ಪ್ರದರ್ಶನ, ವಿಚಾರ ಸಂಕಿರಣ ಹಾಗೂ ತರಬೇತಿಗಳನ್ನು ಹಮ್ಮಿಕೊಂಡು ಕಲೆ ಸಾಹಿತ್ಯವನ್ನು ಬೆಳೆಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಕಸಂವಾ 70 ಕವಿಸ 2022

(ವಿ. ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.